# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 209 (1497)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ರಾಜ್ಯದಲ್ಲಿರುವ `ಬಿ' ಖರಾಬು ಜಮೀನುಗಳ ಕುರಿತು

(ಅ) ರಾಜ್ಯದಲ್ಲಿನ ಒಟ್ಟು ಎಷ್ಟು ವಿಸ್ತೀರ್ಣದ ಅಧಿಕೃತ `ಬಿ' ಖರಾಬು ಜಮೀನುಗಳು ಲಭ್ಯವಿದೆ ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ `ಬಿ'ಖರಾಬು ಜಮೀನಗಳನ್ನು ಯಾವ ಆಧಾರದ ಮೇರೆಗೆ ಗುರುತಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸಾರ್ವಜನಿಕ ಉಪಯೋಗಕ್ಕೆ ಮೀಸಲಿಟ್ಟ `ಬಿ' ಖರಾಬು ಭೂಮಿಯನ್ನು ಸರ್ಕಾರದ ವತಿಯಿಂದ ಖಾಸಗಿಯವರ ಲಾಬಿಗೆ ಮಣಿದು ಅವರಿಗೆ ಮಾರಾಟ ಮಾಡಲು ಸರ್ಕಾರ ಚಿಂತಿಸಿದೆಯೇ ; ಈ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ವಿರೋಧ ವ್ಯಕ್ತವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರ ನಿಲುವೇನು ; (ವಿವರ ನೀಡುವುದು)

(ಈ) ಅನೇಕ ಕಡೆ ಮೂಲಸೌಕರ್ಯಕ್ಕಾಗಿ ಮೀಸಲಿಟ್ಟ `ಬಿ' ಖರಾಬು ಭೂಮಿಯನ್ನು ಹಲವು ಖಾಸಗಿ ವ್ಯಕ್ತಿ/ಸಂಸ್ಥೆಗಳಿಂದ ಭೂ ಕಬಳಿಕೆಯಾಗಿರುವ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು ; ವಿವರ ನೀಡುವುದು ಮತ್ತು ಈ ಪ್ರಕರಣಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)